೧೯೮೫ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ೧೯೮೫ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೫ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೇ, ೧೯೮೫ನೇ ಇಸವಿಯ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

*ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

೧೯೮೫ನೇ ಇಸವಿಯ ಕರ್ನಾಟಕ ವಿಲಾಸ ಉಪಹಾರ ಗೃಹ ಹಾಗೂ ವಸತಿ ಗೃಹಗಳ

ಮೇಲಿನ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ೧೯೮೫ನೇ ಇಸವಿಯ ಕರ್ನಾಟಕ ವಿಲಾಸ ಹಾಗೂ ವಸತಿ ಗೃಹಗಳ ಮೇಲಿನ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೫ನೇ ಇಸವಿಯ ಕರ್ನಾಟಕ ವಿಲಾಸ ಉಪಹಾರ ಗೃಹ ಹಾಗೂ ವಸತಿ ಗೃಹಗಳ ಮೇಲಿನ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೇ, ೧೯೮೫ನೇ ಇಸವಿಯ ಕರ್ನಾಟಕ ವಿಲಾಸ ಉಪಹಾರ ಗೃಹ ಹಾಗೂ ವಸತಿ ಗೃಹಗಳ ಮೇಲಿನ ತೆರಿಗೆಗೆ ಸಂಬಂಧಿಸಿದ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

*ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

೧೯೮೫ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ೧೯೮೫ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾಪ ಏನೆಂದರೆ ''೧೯೮೫ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ''ವನ್ನು ಈ ಸಭೆಯ ಮುಂದೆ ಮಂಡಿಸಲು ಅನುಮತಿ ನೀಡುವುದು.